# MAY 21,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಗ್ರಾಮೀಣ ಜನರ ಬದುಕಿನ ಬಲವರ್ಧನೆಯ** ಜೊತೆಗೆ, ನಿಸರ್ಗ ಸಂರಕ್ಷಣೆಗೂ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ನೆರವಾಗುತ್ತಿದೆ ಎಂದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಕೊಪ್ಪಳ ಜಿಲ್ಲೆ, ಯಲಬುರ್ಗಾ ತಾಲೂಕು, ಚಿಕ್ಕಮ್ಯಾಗೇರಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿ, ನರೇಗಾ ಯೋಜನೆ ಅಡಿ, ನಿರ್ಮಾಣಗೊಂಡ, ಇಂಗು ಗುಂಡಿಗಳು,  ಮಣ್ಣಿನ ಸವಕಳಿ ತಡೆಗಟ್ಟಿ, ಫಲವತ್ತತೆ ವೃದ್ಧಿಸುವಲ್ಲಿ, ಅಂತರ್ಜಲ ಹೆಚ್ಚಳ ಹಾಗೂ ಹಸಿರು ಹೊದಿಕೆ ಹೆಚ್ಚಿಸುವಲ್ಲಿ ಜೊತೆಗೆ, ಪ್ರವಾಹ ಸಾಧ್ಯತೆಗಳಿಗೆ ತಡೆಯೊಡ್ಡುವಲ್ಲಿ, ಸಹಕಾರಿಯಾಗಿವೆ ಎಂದರು.

<><><>

**ಮಾಜಿ ಪ್ರಧಾನಮಂತ್ರಿ,** ರಾಜೀವ ಗಾಂಧಿ ಅವರ ಸಂಸ್ಮರಣೆ ಹಿನ್ನೆಲೆ, ಇಂದು ದೇಶಾದ್ಯಂತ ಭಯೋತ್ಪಾದನಾ ವಿರೋಧಿ ದಿನ, ಆಚರಿಸಲಾಗುತ್ತಿದೆ. 1991 ರ ಈ ದಿನದಂದು ಪ್ರಧಾನಿ ರಾಜೀವ್ ಗಾಂಧಿ ಅವರು ಭಯೋತ್ಪಾದಕರ ದಾಳಿಗೆ ತುತ್ತಾಗಿ ತಮಿಳುನಾಡಿನ ಶ್ರೀ ಪೆರಂಬದೂರಿನಲ್ಲಿ ತಮ್ಮ ಪ್ರಾಣ ಕಳೆದುಕೊಂಡಿದ್ದರು. ಭಯೋತ್ಪಾದನೆಯ ವಿರುದ್ಧ  ಸಾರ್ವಜನಿಕ ಜಾಗ್ರತಿ ಅಗತ್ಯತೆಯ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಹುಬ್ಬಳ್ಳಿಯ ನಿವೃತ್ತ ಏರ್ ಕಮಡೊರ್ ಸಿ.ಎಸ್ ಹವಾಲ್ದಾರ್

<><><>

**ಧ್ವನಿ: ಏರ್ ಕಮಡೊರ ಸಿ.ಎಸ್ ಹವಾಲ್ದಾರ್ 37 ಸೆಕೆಂದುಗಳು**

<><><>

**ಬೆಂಗಳೂರು ನಗರ ಪ್ರದೇಶದಲ್ಲಿ ಕಳೆದ** ಎರಡು ದಿನಗಳಿಂದ ನಿರಂತರವಾಗಿ ಮಳೆ ಸುರಿಯುತ್ತಿದ್ದು, ಇಂದು ಮತ್ತು ನಾಳೆ ಯಲ್ಲೋ ಅಲರ್ಟ್ ಘೋಷಿಸಲಾಗಿದೆ. ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಮಳೆಯಿಂದ ಉಂಟಾಗಬಹುದಾದ ಪ್ರವಾಹ ಪರಿಸ್ಥಿತಿ ಹತೋಟಿಗೆ, ಶಾಶ್ವತ ಪರಿಹಾರ ಮಾರ್ಗಗಳನ್ನು ಕಂಡುಕೊಳ್ಳುವಂತೆ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಬಿಬಿಎಂಪಿ ಆಡಳಿತಾಧಿಕಾರಿ ತುಷಾರ್ ಗಿರಿನಾಥ್ ಅಧಿಕಾರಿಗಳಿಗೆ ಸೂಚಿಸಿದರು.  ವಿಕಾಸಸೌಧದಲ್ಲಿ ಜರುಗಿದ ವಿವಿಧ ಇಲಾಖೆ ಅಧಿಕಾರಿಗಳ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಪಾಲಿಕೆ ವ್ಯಾಪ್ತಿಯ ಎಲೆಕ್ಟ್ರಾನಿಕ್ ಸಿಟಿ ಸಮೀಪ, ರಾಷ್ಟ್ರೀಯ ಹೆದ್ದಾರಿಯಲ್ಲಿ ನೀರು ನಿಲ್ಲದಂತೆ ಕ್ರಮವಹಿಸಲು ರಾಷ್ಟ್ರೀಯ ಹೆದ್ದಾರಿ ಅಧಿಕಾರಿಗಳಿಗೆ ಸೂಚಿಸಿರುವುದಾಗಿ ತಿಳಿಸಿದರು. ನಗರದಲ್ಲಿ ಜಲಾವೃತಗೊಳ್ಳುವ ರೇಲ್ವೇ ಕೆಳ ಸೇತುವೆಗಳ ಪಟ್ಟಿ ಮಾಡಿ, ಶಾಶ್ವತ ಪರಿಹಾರ ಮಾರ್ಗಗಳನ್ನು ಕಂಡುಕೊಳ್ಳಬೇಕೆಂದು ಸೂಚಿಸಿದರು.

<><><>

**ಬೃಹತ್ ಬೆಂಗಳೂರು ಮಹಾನಗರ** ಪಾಲಿಕೆ ವ್ಯಾಪ್ತಿಯಲ್ಲಿ ಮಳೆಯಿಂದ ಹಾನಿಗೊಳಗಾಗಿರುವ ಪ್ರದೇಶಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಹಾಗೂ ಬೆಂಗಳೂರು ನಗರಾಭಿವೃದ್ಧಿ ಖಾತೆ ಸಚಿವ ಡಿ.ಕೆ ಶಿವಕುಮಾರ್ ರವರು ಇಂದು ಜಂಟಿಯಾಗಿ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ. ಸಾರ್ವಜನಿಕರು ಮಳೆಯಿಂದ ಸಮಸ್ಯೆಗಳನ್ನು ಎದುರಿಸುತ್ತಿದ್ದಲ್ಲಿ 15 33 ಸಂಖ್ಯೆಗೆ ಕರೆ ಮಾಡುವಂತೆ ಕೋರಲಾಗಿದೆ.

<><><>

**ಚಾಮರಾಜನಗರ,** ಶ್ರೀ ಚಾಮರಾಜೇಶ್ವರ ದೇವಸ್ಥಾನದ ಆವರಣದಲ್ಲಿ ಆಯೋಜಿಸಲಾದ, ವಿಶ್ವ ಅಧಿಕ ರಕ್ತದೊತ್ತಡ ದಿನದ ಜಾಗ್ರತಿ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾಕ್ಟರ್ ಚಿದಂಬರ ಅವರು ಚಾಲನೆ ನೀಡಿದರು. ಆರೋಗ್ಯ ಕಾರ್ಯಕರ್ತರು ಹಾಗೂ ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳು ಪಾಲ್ಗೊಂಡು, ಸಾರ್ವಜನಿಕ ಜಾಗ್ರತಿ ಮೂಡಿಸಿದರು.

<><><>

**ನಿಗದಿಪಡಿಸಿದ** ಮಾರುಕಟ್ಟೆ ಬೆಲೆಗಿಂತ ಹೆಚ್ಚಿನ ಹಣವನ್ನು ರೈತರಿಂದ ಪಡೆದು ಅಕ್ರಮವಾಗಿ ರಸಗೊಬ್ಬರ ಮಾರಾಟ ಮಾಡುತ್ತಿರುವ ದೂರಿನ ಹಿನ್ನೆಲೆ, ಕಲಬುರಗಿ ನಗರದ ಗಂಜ್ ಪ್ರದೇಶದಲ್ಲಿ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಸಮದ್ ಪಟೇಲ್ ನೇತೃತ್ವದ ತಂಡ, ವಿವಿಧ ರಸಗೊಬ್ಬರ  ಮಾರಾಟ ಮಳಿಗೆಗಳು ಹಾಗೂ ಗೋದಾಮುಗಳಿಗೆ ತೆರಳಿ ಪರಿಶೀಲನೆ ಹಾಗೂ ತಪಾಸಣೆ ನಡೆಸಿತು.

<><><>

**‘ನನ್ನ ಭಾರತ, ನಾಗರಿಕ ರಕ್ಷಣಾ ಸ್ವಯಂಸೇವಕ’**ರಾಗಿ ಸೇವೆ ಸಲ್ಲಿಸಲು, ಭಾರತ ಸರ್ಕಾರದ ಯುವ ವ್ಯವಹಾರ ಮತ್ತು ಕ್ರೀಡಾ ಇಲಾಖೆಯಿಂದ, ಯುವಜನತೆಗೆ ಕರೆ ನೀಡಲಾಗಿದೆ. ತುರ್ತು ಪರಿಸ್ಥಿತಿ ಹಾಗೂ ಬಿಕ್ಕಟ್ಟಿನ ಸಮಯದಲ್ಲಿ, ಯುವಜನತೆ ದೇಶಕ್ಕೆ ತಮ್ಮ ಕೊಡುಗೆ ನೀಡಲು ಇದು ಸದವಕಾಶವಾಗಿದೆ. my bharat.gov.in ಜಾಲತಾಣದ ಮೂಲಕ, ಹೆಸರು ನೊಂದಾಯಿಸಬಹುದು.

<><><>

**ಬೆಂಗಳೂರು ಸಹಕಾರ ತರಬೇತಿ ಸಂಸ್ಥೆ,** ಕರ್ನಾಟಕ ಇನ್ಸ್ಟಿಟ್ಯೂಟ್ ಆಫ್ ಕೋ– ಅಪರೇಟಿವ್ ಮ್ಯಾನೇಜಮೆಂಟ್ ನಲ್ಲಿ ಜುಲೈ 1ರಿಂದ, 6 ತಿಂಗಳ ಕಾಲಾವಧಿಯ ಡಿಪ್ಲೊಮಾ ಇನ್ ಕೊ–ಅಪರೇಟಿವ್ ಮ್ಯಾನೆಜಮೆಂಟ್ ತರಬೇತಿ ಆರಂಭಿಸಲಾಗುತ್ತಿದ್ದು, ಆಸಕ್ತರು ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.**

<><><>